# ಕರ್ನಾಟಕ ವಿದ್ಯುತ್ ಮಂಡಳಿ ನೌಕರರ ಒಕ್ಕೂಟ ಮತ್ತು ಸಂಘಗಳ ಒಕ್ಕೂಟ

( ನೋಂದಣಿ ಸಂಖ್ಯೆ 1093/98-99 )

ಹಾಸನ ವೃತ್ತ, ಹಾಸನ.

ಸಂಖ್ಯೆ :- ಸಂಘಗಳ ಒಕ್ಕೂಟ/26-27/01 ದಿನಾಂಕ:- .06.2026

ಗೆ

ಮಾನ್ಯ ಸ್ವರೂಪ್ ಪ್ರಕಾಶ್ ರವರು
ಶಾಸಕರು
ಹಾಸನ ವಿಧಾನ ಸಭಾ ಕ್ಷೇತ್ರ
ಹಾಸನ ತಾಲ್ಲೂಕು, ಹಾಸನ ಜಿಲ್ಲೆ.

ವಿಷಯ :- ಟಾಟಾ ಪವರ್ ಕಂಪನಿ ಲಿಮಿಟೆಡ್ ರವರು ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆ ಚಟುವಟಿಕೆಯನ್ನು ಪ್ರಾರಂಭಿಸಲು ಪರವಾನಗಿ ನೀಡುವ ಉದ್ದೇಶವನ್ನು ವಿರೋಧಿಸಿ ಆಕ್ಷೇಪಣೆ ಸಲ್ಲಿಸುವ ಬಗ್ಗೆ.

ಮಾನ್ಯ ಶಾಸಕರಲ್ಲಿ ಹಾಸನ ವೃತ್ತದ ಕ.ವಿ.ಮಂ ನೌಕರರ ಒಕ್ಕೂಟ ಮತ್ತು ಸಂಘಗಳ ಒಕ್ಕೂಟದ ಎಲ್ಲಾ ಹಂತದ ಪದಾಧಿಕಾರಿಗಳು ಹಾಗೂ ಎಲ್ಲಾ ಹಂತದ ಅಧಿಕಾರಿ ನೌಕರರೆಲ್ಲರೂ ತಮ್ಮಲ್ಲಿ ವಿನಂತಿಸುವುದೇನೆಂದರೆ ಈಗಾಗಲೇ ಪತ್ರಿಕಾ ಪ್ರಕಟಣೆ ಮೂಲಕ ತಮಗೆ ತಿಳಿದಿರುವಂತೆ "ಟಾಟಾ ಪವರ್ ಕಂಪನಿ ಲಿಮಿಟೆಡ್" ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆ ಚಟುವಟಿಕೆಯನ್ನು ಪ್ರಾರಂಭಿಸಲು ಪರವಾನಿಗೆಗಾಗಿ ಕರ್ನಾಟಕ ರಾಜ್ಯದ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಅರ್ಜಿಯನ್ನು ಸಲ್ಲಿಸಿರುವುದು ತಮಗೆ ತಿಳಿದ ವಿಷಯವಾಗಿದೆ. ಖಾಸಗಿ ಸಂಸ್ಥೆಯು ರಾಜ್ಯ ವಿದ್ಯುತ್ ವಿತರಣೆ ಕ್ಷೇತ್ರಕ್ಕೆ ಬರಲು ಬಯಸಿ ಅರ್ಜಿ ಸಲ್ಲಿಸಿರುವುದು ನಿಗಮದ ನೌಕರರು ಮತ್ತು ಗ್ರಾಹಕರಿಗೆ ಆತಂಕಕಾರಿ ವಿಷಯವಾಗಿರುತ್ತದೆ. ಹಾಗೂ

ವಿದ್ಯುತ್ ಕಾಯ್ದೆ 2003 ಕಲಂ 14 ಮತ್ತು 15 ರ ಅಡಿಯಲ್ಲಿ ಖಾಸಗಿ ಕಂಪನಿಗಳು ಸಲ್ಲಿಸಿರುವ ವಿದ್ಯುತ್ ವಿತರಣಾ ಪರವಾನಗಿ ನೀಡಿದಲ್ಲಿ ಸಂಭವಿಸಬಹುದಾದ ಪ್ರಮುಖ ಅನಾನುಕೂಲಗಳೇನೆಂದರೆ

1) ಖಾಸಗಿ ಕಂಪನಿಗಳು ಲಾಭದ ಉದ್ದೇಶದಿಂದ ಕೆಲಸ ಮಾಡುತ್ತವೆ. ಇದರಿಂದ ಸಾಮಾನ್ಯ ಜನರಿಗೆ ಮತ್ತು ಬಡ ವರ್ಗದವರಿಗೆ ವಿದ್ಯುತ್ ದರ ಹೆಚ್ಚಾಗುತ್ತದೆ.
2) ಸಾರ್ವಜನಿಕ ಉದ್ಯೋಗ ಭದ್ರತೆಗೆ ಆತಂಕ, ಸಾವಿರಾರು ನಿರುದ್ಯೋಗಿ ಯುವಕರಿಗೆ ಸರ್ಕಾರಿ ಉದ್ಯೋಗ ನೇಮಕಾತಿ ಸಿಗುವುದಿಲ್ಲ.
3) ಖಾಸಗಿ ಕಂಪನಿಗಳಿಗೆ ವಹಿಸಿದರೆ ಬಡ, ಮಧ್ಯಮ ದೀನ ದಲಿತರಿಗೆ ಮೀಸಲಾತಿ ಇಲ್ಲದೆ ತೊಂದರೆಯಾಗುತ್ತದೆ.
4) ಸಣ್ಣ ಮತ್ತು ಮಧ್ಯಮ ಗುಡಿ ಕೈಗಾರಿಕೆಗಳಿಗೆ ವಿದ್ಯುತ್ ದರ ಹೆಚ್ಚಳವಾದರೆ ಕೈಗಾರಿಕೆ ಬೆಳವಣಿಗೆ ಕುಂಠಿತವಾಗುತ್ತದೆ.
5) ಸರ್ಕಾರವು ಹಲವು ವರ್ಷಗಳ ಕಾಲ ಸಾರ್ವಜನಿಕರ ಹಣದಿಂದ ನಿರ್ಮಿಸಿದ ವಿದ್ಯುತ್ ಜಾಲ ಮತ್ತು ಮೂಲಸೌಕರ್ಯಗಳನ್ನು ಖಾಸಗಿ ಕಂಪನಿಗಳಿಗೆ ಒಪ್ಪಿಸುವುದು ನ್ಯಾಯಸಮ್ಮತವಲ್ಲ.

Scanned with OKEN Scanner

6) ಖಾಸಗಿ ಕಂಪನಿಗಳು ನಗರ ಮತ್ತು ಲಾಭದಾಯಕ ಪ್ರದೇಶಗಳಿಗೆ ಮಾತ್ರ ಸೇವೆ ನೀಡುವ ಸಾಧ್ಯತೆ ಇದ್ದು, ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳು ನಿರ್ಲಕ್ಷ್ಯಕ್ಕೊಳಗಾಗುವ ಸಾಧ್ಯತೆ ಇದೆ.

7) ವಿದ್ಯುತ್ ದರಗಳ ಭಾರಿ ಏರಿಕೆ, ಖಾಸಗಿ ಸಂಸ್ಥೆಗಳು ಹೆಚ್ಚಿನ ಲಾಭಕ್ಕಾಗಿ ವಿದ್ಯುತ್ ದರಗಳನ್ನು ಹೆಚ್ಚಿಸುವ ಅಪಾಯವಿದೆ. ಇದರಿಂದ ಸಾಮಾನ್ಯ ಜನರ ಜೀವನದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ.

8) ಆಯ್ದ ಪ್ರದೇಶಗಳಲ್ಲಿ ಸೇವೆ (Cherry Picking) ಖಾಸಗಿ ಕಂಪನಿಗಳು ಕೇವಲ ಲಾಭದಾಯಕ ಪ್ರದೇಶಗಳನ್ನು ಮಾತ್ರ ಆಯ್ಕೆ ಮಾಡಿಕೊಂಡು ನಷ್ಟದ ಪ್ರದೇಶಗಳನ್ನು ಕಡೆಗಣಿಸುವ ಸಾಧ್ಯತೆ ಇದೆ.

9) ಸರ್ಕಾರಿ ಕಂಪನಿಗಳು ಜನರಿಗೆ, ಮಾಧ್ಯಮಕ್ಕೆ, ಕಾನೂನಿಗೆ (RTI) ಮತ್ತು ಜನ ಪ್ರತಿನಿಧಿಗಳಿಗೆ ಉತ್ತರದಾಯಿತ್ವ ಹೊಂದಿರುತ್ತವೆ. ಆದರೆ ಖಾಸಗಿ ಕಂಪನಿಗಳಲ್ಲಿ ಸಾರ್ವಜನಿಕ ಉತ್ತರದಾಯಿತ್ವಕ್ಕೆ ಅವಕಾಶವಿರುವುದಿಲ್ಲ.

10) ಗ್ರಾಮೀಣ ಮೂಲಸೌಕರ್ಯದ ನಿರ್ಲಕ್ಷ್ಯ, ಮಲೆನಾಡು, ಕರಾವಳಿ ಮತ್ತು ಹಿಂದುಳಿದ ಗ್ರಾಮೀಣ ಭಾಗಗಳಲ್ಲಿ ಖಾಸಗಿ ಸಂಸ್ಥೆಗಳು ವಿದ್ಯುತ್ ಸೇವೆಗಳನ್ನು ನೀಡುವುದಿಲ್ಲ.

11) ಸಾರ್ವಜನಿಕ ಹಣದಿಂದ ನಿರ್ಮಿಸಿರುವ ವಿದ್ಯುತ್ ಗ್ರಿಡ್, ಕಂಬಗಳು ಮತ್ತು ಮೂಲಸೌಕರ್ಯಗಳನ್ನು ಖಾಸಗಿ ಸಂಸ್ಥೆಗೆ ನೀಡುವುದು ಜನರ ಹಣದ ದುರುಪಯೋಗವಾಗಿದೆ.

12) ಗ್ರಾಹಕರಿಗೆ, ರೈತರ ನೀರಾವರಿ ಯೋಜನೆಗಳಿಗೆ ಉಚಿತ ವಿದ್ಯುತ್ / ರಿಯಾಯಿತಿ ದರದಲ್ಲಿ ಖಾಸಗಿ ಕಂಪನಿಗಳು ವಿದ್ಯುತ್ ಪೂರೈಸುವುದಿಲ್ಲ. ಇದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿ ಕೃಷಿಗೆ ಅಪಾಯಕಾರಿಯಾಗುತ್ತದೆ ಮತ್ತು ಅಗತ್ಯ ಆಹಾರ ಪದಾರ್ಥಗಳ ಬೆಲೆ ಹೆಚ್ಚಳವಾಗುತ್ತದೆ.

13) ವಿದ್ಯುತ್ ದೇಶದ ಭದ್ರತೆ ಮತ್ತು ಜನರ ಬದುಕಿಗೆ ಅತ್ಯಗತ್ಯವಾಗಿದ್ದು ಇದನ್ನು ಖಾಸಗಿ ಲಾಭದ ಉದ್ದೇಶದ ಅಧೀನಕ್ಕೆ ನೀಡುವುದು ರಾಜ್ಯದ ಮತ್ತು ಒಕ್ಕೂಟ ವ್ಯವಸ್ಥೆಯ ಮೂಲಭೂತ ಸೌಕರ್ಯಕ್ಕೆ ಮಾರಕವಾಗುತ್ತದೆ. ಇದನ್ನು ಲಾಭ ಲೆಕ್ಕಚಾರವಿಲ್ಲದೆ ಗ್ರಾಹಕರು ಕೈಗಾರಿಕೆ, ಕೃಷಿ ಅಭಿವೃದ್ಧಿಗೆ ಬಳಕೆ ಮಾಡುತ್ತಿದ್ದು, ಖಾಸಗಿಯವರು ಬರೀ ಲಾಭ ಮಾಡುವ ಉದ್ದೇಶ ಹೊಂದಿರುತ್ತಾರೆ.

ವಿದ್ಯುತ್ ಕ್ಷೇತ್ರದಲ್ಲಿ ಕೆಲವು ಭಾಗಗಳಲ್ಲಿ ಖಾಸಗಿ ಸಂಸ್ಥೆಗಳು ಪ್ರವೇಶಿಸಿದ್ದು, ಸಾರ್ವಜನಿಕ ಸೇವೆಗಳ ಮೇಲೆ ಪರಿಣಾಮ ಬೀರುತ್ತಿವೆ. ಕರ್ನಾಟಕದ ಜನರ ಹಿತಾಸಕ್ತಿ, ರೈತರು ಮತ್ತು ವಿದ್ಯುತ್ ಕ್ಷೇತ್ರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಹಿತದೃಷ್ಟಿಯಿಂದ ವಿದ್ಯುತ್ ಕಂಪನಿಗಳನ್ನು ಸರ್ಕಾರದ ಅಧೀನದಲ್ಲೆ ಮುಂದುವರೆಸಬೇಕಾಗಿ ಕೋರುತ್ತೇವೆ.

ಈ ಮೇಲಿನ ಎಲ್ಲಾ ಅನಾನುಕೂಲಗಳಿಂದ ಕರ್ನಾಟಕದಲ್ಲಿ ವಿದ್ಯುತ್ ವಿತರಣೆಗೆ ಟಾಟಾ ಪವರ್ ಕಂಪನಿಗೆ ಪರವಾನಗಿ ನೀಡಬಾರದೆಂದು ಕಾರ್ಯದರ್ಶಿಗಳು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗ, ನಂ-16, ಸಿ/1, ಮಿಲ್ಲರ್‌ಟ್ಯಾಂಕ್ ಬೆಡ್ ಏರಿಯ, ವಸಂತ ನಗರ, ಬೆಂಗಳೂರು – 560052 ರವರಿಗೆ ಆಕ್ಷೇಪಣೆ ಸಲ್ಲಿಸುವುದರ ಜೊತೆಗೆ ಕರ್ನಾಟಕ ರಾಜ್ಯ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಿಗೆ ಹಕ್ಕೊತ್ತಾಯಿಸಬೇಕೆಂದು ಹಾಸನ ವೃತ್ತದ ಕ.ವಿ.ಮಂ ನೌಕರರ ಸಂಘಗಳ ಒಕ್ಕೂಟದ ಎಲ್ಲಾ ಹಂತದ ಪದಾಧಿಕಾರಿಗಳು ಹಾಗೂ ಎಲ್ಲಾ ಹಂತದ ಅಧಿಕಾರಿ ನೌಕರರೆಲ್ಲರೂ ತಮ್ಮಲ್ಲಿ ವಿನಂತಿಸುತ್ತೇವೆ.

ವಂದನೆಗಳೊಂದಿಗೆ

ಅಧಿಕ ಕಾರ್ಯದರ್ಶಿ
ಕೇಂದ್ರ ಕಾರ್ಯಕಾರಿ ಸಮಿತಿ,
ಕವಿಪ್ರನಿ ನೌಕರರ ಸಂಘ (ಎ.ನಂ.659)
ಬೆಂಗಳೂರು.

ಸಂಘಟನಾ ಕಾರ್ಯದರ್ಶಿ
ಇಂಜಿನಿಯರ್ಸ್ ಅಸೋಸಿಯೇಷನ್
ಹಾಸನ ವೃತ್ತ.

ಸಂಘಟನಾ ಕಾರ್ಯದರ್ಶಿಗಳು
ಕ.ವಿ.ಪ್ರ.ನಿ ನೌಕರರ ಸಂಘ (ಎ.659)
ಹಾಸನ ವೃತ್ತ, ಹಾಸನ.

ಉಪಾಧ್ಯಕ್ಷರು
ಪ.ಜಾ ಮತ್ತು ಪ.ಪಂ ಕ.ಸಂ (ಎ.ನಂ-466)
ಸೆಸ್ಕ್, ಹಾಸನ.

ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರು
ಲೆಕ್ಕಾಧಿಕಾರಿಗಳ ಸಂಘ,
ಹಾಸನ.

ಉಪ ಕಾರ್ಯದರ್ಶಿ
ಡಿಪ್ಲೋಮಾ ಇಂಜಿನಿಯರ್ ಅಸೋಸಿಯೇಷನ್,
ಸೆಸ್ಕ್, ಹಾಸನ.

Scanned with OKEN Scanner